# ಮಂಗಳೂರು ವಿಶ್ವವಿದ್ಯಾನಿಲಯ

ದಿನಾಂಕ 04.08.2021ರಂದು ಪೂರ್ವಾಹ್ನ ಗಂಟೆ 11.00 ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ರಾಣಿ ಅಬ್ಬಕ್ಕ ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2021-22 ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ನಡವಳಿಗಳು.

ಉಪಸ್ಥಿತರು:

ಅನುಪಸ್ಥಿತರು:

## ಪ್ರಾರಂಭಿಕ

ಪ್ರಾರಂಭದಲ್ಲಿ ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಕುಲಸಚಿವರು, ಕುಲಸಚಿವರು (ಪರೀಕ್ಷಾಂಗ), ಹಣಕಾಸು ಅಧಿಕಾರಿ, ಎಲ್ಲಾ ಸದಸ್ಯರುಗಳು, ವಿಶೇಷ ಆಹ್ವಾನಿತರು, ಮಾಧ್ಯಮ ಮಿತ್ರರು ಮತ್ತು ಇತರರನ್ನು ಸಭೆಗೆ ಸ್ವಾಗತಿಸಿದರು.

➢ ಸ್ವಾಗತ:

I. ಸರಕಾರದ ಆದೇಶ ಸಂಖ್ಯೆ:ಇಡಿ 15 ಯುಡಿವಿ 2021 ದಿನಾಂಕ 21.04.2021 ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರಾಗಿ ನೇಮಕಗೊಂಡು ದಿನಾಂಕ 21.04.2021ರಿಂದ ಕುಲಸಚಿವರಾಗಿ ಕಾರ್ಯ ನಿರ್ವಹಿಸುತ್ತಿರುವ ಡಾ. ಕಿಶೋರ್ ಕುಮಾರ್ ಸಿ.ಕೆ, ನಿರ್ದೇಶಕರು, ಸ್ನಾತಕೋತ್ತರ ದೈಹಿಕ ಶಿಕ್ಷಣ ಮತ್ತು ಕ್ರೀಡಾ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರನ್ನು ಮಾನ್ಯ ಕುಲಪತಿಗಳು ಸಭೆಗೆ ಸ್ವಾಗತಿಸಿದರು.

II. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 30(1)(vi) ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಮಾನ್ಯ ಕುಲಪತಿಯವರಿಂದ ನಾಮನಿರ್ದೇಶನಗೊಂಡಿರುವ ಈ ಕೆಳಗಿನ ಪ್ರಾಂಶುಪಾಲರುಗಳನ್ನು ಕುಲಸಚಿವರು ಸಭೆಗೆ ಸ್ವಾಗತಿಸಿದರು.

1) ಶ್ರೀಮತಿ ರಾಧಿಕಾ ಪೈ.ಟಿ, ಪ್ರಾಂಶುಪಾಲರು, ಮಾಧವ ಪೈ ಮೇಮೋರಿಯಲ್ ಕಾಲೇಜ್, ವಿದ್ಯಾನಗರ, ಮಣಿಪಾಲ,
2) ಡಾ. ಸುಭಾಷಿನಿ ಶ್ರೀವತ್ಸ, ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಸಂಧ್ಯಾ ಕಾಲೇಜು, ಮಂಗಳೂರು,
3) ಶ್ರೀಮತಿ ಸತ್ಯರಂಜಿನಿ, ಪ್ರಾಂಶುಪಾಲರು, ಕೃಷ್ಣಬಾಯಿ ವಾಸುದೇವ ಶೆಣೈ ಮೆಮೋರಿಯಲ್ ಕಾಲೇಜು, ಕಟಪಾಡಿ

4) ಶ್ರೀಮತಿ ನಳಿನಾಕ್ಷಿ ಎ.ಎಸ್, ಸರಕಾರಿ ಪ್ರಥಮ ದರ್ಜೆ ಕಾಲೇಜು, ಪುತ್ತೂರು,
5) ಡಾ. ಮಂಜುನಾಥ ಎ ಕೋಟ್ಯಾನ್, ಪ್ರಾಂಶುಪಾಲರು, ಶ್ರೀ ಭುವನೇಂದ್ರ ಕಾಲೇಜು, ಕಾರ್ಕಳ

➤ ಕೃತಜ್ಞತೆ:

I. ದಿನಾಂಕ 27.04.2020 ರಿಂದ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರಾಗಿ ಕಾರ್ಯ ನಿರ್ವಹಿಸುತ್ತಿದ್ದ ಶ್ರೀ ಕೆ. ರಾಜು ಮೊಗವೀರ, ಕೆ.ಎ.ಎಸ್, ಇವರನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 32 ಆಸೇವ 2021 ದಿನಾಂಕ 19.03.2021ರಂತೆ ಕುಲಸಚಿವರ ಹುದ್ದೆಯ ಕರ್ತವ್ಯದಿಂದ ಬಿಡುಗಡೆಗೊಳಿಸಿರುವ ವಿಷಯವನ್ನು ಕುಲಸಚಿವರು ಸಭೆಯ ಗಮನಕ್ಕೆ ತಂದರು.

II. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1) (vi) ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸದಸ್ಯರುಗಳಾಗಿ ನಾಮನಿರ್ದೇಶನಗೊಂಡಿದ್ದ ಈ ಕೆಳಗಿನ ಪ್ರಾಂಶುಪಾಲರುಗಳನ್ನು ಸದರಿಯವರುಗಳ ಸದಸ್ಯತ್ವದ ಅವಧಿಯು ಕೊನೆಗೊಂಡಿರುವುದರಿಂದ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಿರುವ ವಿಷಯವನ್ನು ಕುಲಸಚಿವರು ಸಭೆಯ ಗಮನಕ್ಕೆ ತಂದರು.

1) ಶ್ರೀ ಎಂ. ಆರ್ ಮಂಜುನಾಥ, ಪ್ರಾಂಶುಪಾಲರು, ಸರಕಾರಿ ಪ್ರಥಮ ದರ್ಜೆ ಕಾಲೇಜು, ಹೆಬ್ರಿ,
2) ಶ್ರೀ ಬಾಲಕೃಷ್ಣ ಎಸ್ ಹೆಗ್ಡೆ, ಪ್ರಾಂಶುಪಾಲರು, ಸರಕಾರಿ ಪ್ರಥಮ ದರ್ಜೆ ಕಾಲೇಜು, ತೆಂಕನಿಡಿಯೂರು, ಉಡುಪಿ,
3) ಡಾ. ಪಾಂಡುರಂಗ ನಾಯಕ್, ಪ್ರಾಂಶುಪಾಲರು, ಶ್ರೀ ವೆಂಕಟರಮಣ ಸ್ವಾಮಿ ಕಾಲೇಜು, ಬಂಟ್ವಾಳ
4) ಡಾ. ನಿತ್ಯಾನಂದ ಕೆ., ಪ್ರಾಂಶುಪಾಲರು, ಎಸ್.ಡಿ.ಎಮ್ ಕಾಲೇಜ್ ಆಫ್ ಎಜುಕೇಶನ್, ಉಜಿರೆ,
5) ಪ್ರೊ. ಅಖಿಲೇಶ್ ಪಿ.ಎಂ, ಪ್ರಾಂಶುಪಾಲರು, ಫಾದರ್ ಮುಲ್ಲರ್ ಕಾಲೇಜು, ಮಂಗಳೂರು

ಇವರುಗಳೆಲ್ಲರೂ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುತ್ತಾರೆ. ಇವರುಗಳಿಗೆ ಶೈಕ್ಷಣಿಕ ಮಂಡಳಿಯ ಪರವಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

## ಪ್ರಾಸ್ತಾವಿಕ

ಮಾನ್ಯ ಕುಲಪತಿಗಳು ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಈ ಕೆಳಗಿನ ವಿಷಯಗಳನ್ನು ಸಭೆಗೆ ತಿಳಿಸಿದರು.

1. ಮಂಗಳೂರು ವಿಶ್ವವಿದ್ಯಾನಿಲಯದ ಪದವಿ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳ ಭೌತಿಕ ತರಗತಿಗಳನ್ನು ಸರಕಾರದ ನಿರ್ದೇಶನದಂತೆ ನಡೆಸಲಾಗುವುದೆಂಬುದಾಗಿ ಸಭೆಗೆ ತಿಳಿಸಿದರು.

2. ಮಂಗಳೂರು ವಿಶ್ವವಿದ್ಯಾನಿಲಯದ ಪದವಿ ಕಾಲೇಜುಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಕ್ರಮಬದ್ಧವಾಗಿ ಮತ್ತು ಅರ್ಥಪೂರ್ಣವಾಗಿ ಅನುಷ್ಠಾನಗೊಳಿಸಲು ಹಂತ ಹಂತಗಳಲ್ಲಿ ಕ್ರಮಕೈಗೊಳ್ಳುವುದಾಗಿ ಸಭೆಗೆ ತಿಳಿಸುತ್ತಾ ಈ ಬಗ್ಗೆ ಉನ್ನತ ಶಿಕ್ಷಣ ಇಲಾಖೆ ಮತ್ತು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ಕೈಗೊಂಡಿರುವ ಕ್ರಮಗಳ ಮತ್ತು ತಯಾರಿಸಿರುವ ರೂಪುರೇಷೆಗಳಂತೆ ಕ್ರಮಕೈಗೊಳ್ಳುವುದಾಗಿ ತಿಳಿಸಿದರು. ಪದವಿ ಮಟ್ಟದ ಕಾರ್ಯಕ್ರಮಗಳನ್ನು ನಾಲ್ಕು ವರ್ಷಗಳ ಬಹುಶಿಸ್ತೀಯ ಕಾರ್ಯಕ್ರಮಗಳನ್ನಾಗಿ ಪರಿವರ್ತಿಸಲು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್‌ನಿಂದ ರಾಷ್ಟ್ರೀಯ ಶಿಕ್ಷಣ ನೀತಿ 2020 ರ ಮಾರ್ಗಸೂಚಿ ಸ್ವೀಕೃತವಾದ ನಂತರ ಕ್ರಮಕೈಗೊಳ್ಳುವ ಬಗ್ಗೆ ತಿಳಿಸಿದರು.

3. 75ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲು ಕೇಂದ್ರ ಮತ್ತು ರಾಜ್ಯ ಸರಕಾರಗಳಿಂದ ಸ್ವೀಕೃತವಾದ ಮಾರ್ಗಸೂಚಿ ಮತ್ತು ನಿರ್ದೇಶನಗಳನ್ವಯ ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ಸ್ವಾತಂತ್ರ್ಯ ದಿನಾಚರಣೆಯನ್ನು ನಡೆಸಿ ಕಾರ್ಯಕ್ರಮಗಳ ಎಲ್ಲಾ ದಾಖಲೆಗಳನ್ನು ಫೋಟೋ ಪ್ರತಿಗಳೊಂದಿಗೆ ಸರಕಾರಕ್ಕೆ ಸಲ್ಲಿಸಬೇಕಾಗಿರುವ ವಿಷಯವನ್ನು ಸಭೆಗೆ ತಿಳಿಸಿದರು. ಈ ಬಗ್ಗೆ ಈಗಾಗಲೇ ಸಮಿತಿಯನ್ನು ರಚಿಸಲಾಗಿದ್ದು ಸಮಿತಿಯ ವರದಿಯ ಆಧಾರದ ಮೇಲೆ ಮುಂದಿನ ಕ್ರಮಕೈಗೊಳ್ಳುವುದಾಗಿ ತಿಳಿಸಿದರು.

4. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮದ ಪ್ರತಿಗಳನ್ನೊಳಗೊಂಡಂತೆ, ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅಸ್ತಿತ್ವದಲ್ಲಿರುವ ಪರಿನಿಯಮಗಳು, ವಿನಿಯಮಗಳ ಪ್ರತಿಗಳನ್ನು ಕ್ರೂಢೀಕರಿಸಿ, ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಲಭ್ಯವಾಗುವಂತೆ ಪ್ರಕಟಿಸಲು ಕ್ರಮಕೈಗೊಳ್ಳುವುದಾಗಿ ತಿಳಿಸಿದರು.

5. ಮಂಗಳೂರು ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ ಕಾಲೇಜುಗಳು ಶಿಕ್ಷಕರ ಗ್ರೇಡೇಶನ್ ಪಟ್ಟಿಯನ್ನು ಶೀಘ್ರದಲ್ಲಿ ಅಂತಿಮಗೊಳಿಸಿ ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸಲು ಕ್ರಮಕೈಗೊಳ್ಳುವುದಾಗಿಯೂ ತಿಳಿಸಿದರು.

6. ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ಪದವಿ ಮಟ್ಟದ ಕೆಲವೊಂದು ಕಾರ್ಯಕ್ರಮಗಳಿಗೆ ವಿದ್ಯಾರ್ಥಿ ಬೇಡಿಕೆ ಹೆಚ್ಚಾಗಿರುವುದಾಗಿ ಕಾಲೇಜುಗಳಿಂದ ಮಾಹಿತಿ ಬಂದಿರುವ ಹಿನ್ನೆಲೆಯಲ್ಲಿ ಮತ್ತು COVID - 19ರ ಈ ಸಂದರ್ಭದಲ್ಲಿ, ರಾಷ್ಟ್ರೀಯ ಶಿಕ್ಷಣ ನೀತಿ 2020ನ್ನು ಕೂಡ ಮಂಗಳೂರು

ವಿಶ್ವವಿದ್ಯಾನಿಲಯದಲ್ಲಿ ಅಳವಡಿಸಬೇಕಾಗಿದ್ದು, ಅದರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಪದವಿ ಮಟ್ಟದ ಕಾರ್ಯಕ್ರಮಗಳಲ್ಲಿ ಹೊಸ/ವಿನೂತನ ಕಾರ್ಯಕ್ರಮಗಳನ್ನು ಅಳವಡಿಸಿಕೊಳ್ಳಲು ಕ್ರಮ ಕೈಗೊಳ್ಳಲಿರುವುದಾಗಿ ಸಭೆಗೆ ತಿಳಿಸಿದರು.

7. ರಾಷ್ಟ್ರೀಯ ಮೌಲ್ಯಾಂಕನ ಸಂಸ್ಥೆ NAAC ನಿಂದ ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ದೊರೆತಿರುವ "ಬಿ" ಗ್ರೇಡ್ ಮೇಲೆ ವಿಶ್ವವಿದ್ಯಾನಿಲಯವು ಅಪೀಲು ಸಲ್ಲಿಸಿದ್ದು, ಪ್ರಸ್ತುತ ಸದರಿ ಸಂಸ್ಥೆಯು ಗ್ರೇಡ್‌ನಲ್ಲಿ ಯಥಾಸ್ಥಿತಿಯನ್ನು ಕಾಯ್ದುಕೊಳ್ಳಲು ತಿಳಿಸಿರುವುದರಿಂದ ಗ್ರೇಡನ್ನು ಉನ್ನತೀಕರಿಸಬೇಕಾದಲ್ಲಿ ಮುಂದಿನ ವರ್ಷ ಮಗದೊಮ್ಮೆ ನ್ಯಾಕ್ ಮಾನ್ಯತೆಗೆ ಒಳಪಡಬೇಕಾಗಿರುವ ವಿಚಾರವನ್ನು ತಿಳಿಸಿದರು. ಈ ಬಗ್ಗೆ ಸದರಿ ವಿಚಾರದಲ್ಲಿ ಅನುಭವಿ ವ್ಯಕ್ತಿಗಳನ್ನು ನೇಮಕ ಮಾಡಿಕೊಳ್ಳಲಾಗುವುದು ಎಂಬ ವಿಚಾರವನ್ನು ಸಹ ತಿಳಿಸಿದರು.

8. ಮಂಗಳೂರು ವಿಶ್ವವಿದ್ಯಾನಿಲಯವು ಖಾಸಗಿ ಸಂಸ್ಥೆಗಳೊಂದಿಗೆ ಮಾಡಿಕೊಳ್ಳುತ್ತಿರುವ ಒಡಂಬಡಿಕೆ (MOU)ಗಳನ್ನು ಕಾನೂನಾತ್ಮಕವಾಗಿ ಮತ್ತು ಆಡಳಿತಾತ್ಮಕವಾಗಿ ಪರಿಶೀಲಿಸುತ್ತಿದ್ದು, ಇನ್ನು ಮುಂದಕ್ಕೆ ಸದರಿ ಒಡಂಬಡಿಕೆ (MOU)ಗಳನ್ನು ಸರಕಾರದ ಅನುಮೋದನೆ ಸಲ್ಲಿಸಲಾಗುವುದೆಂಬುದಾಗಿ ತಿಳಿಸಿದರು.

9. COVID-19 ರ ಪರಿಸ್ಥಿತಿಯಲ್ಲಿ ಮೌಲ್ಯಮಾಪಕರಿಗೆ ಪ್ರಯಾಣ ಮಾಡಲು ಕಷ್ಟಸಾಧ್ಯವಾಗಿರುವ ಕಾರಣದಿಂದ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಡಿಜಿಟಲ್ ಮೌಲ್ಯಮಾಪನದ ಅನಿವಾರ್ಯತೆಯಿರುವುದರಿಂದ ಮುಂದಿನ ಶೈಕ್ಷಣಿಕ ವರ್ಷದಿಂದ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಡಿಜಿಟಲ್ ಮೌಲ್ಯಮಾಪನ ಕಾರ್ಯವನ್ನು ಅಳವಡಿಸಿಕೊಳ್ಳಲು ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

10. ಶೈಕ್ಷಣಿಕ ವರ್ಷ 2020-21ನೇ ಸಾಲಿನಲ್ಲಿ ಬಾಕಿ ಇರುವ ಪರೀಕ್ಷೆಗಳನ್ನು ರದ್ದುಪಡಿಸುವ ಬಗ್ಗೆ ಕೆಲವು ವಿದ್ಯಾರ್ಥಿಗಳಿಂದ ಮನವಿಗಳು ಬಂದಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯದ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಸರಕಾರದ ನಿರ್ದೇಶನದಂತೆ, ಬಾಕಿ ಇರುವ ಎಲ್ಲಾ ಪದವಿ ಮತ್ತು ಸ್ನಾತಕೋತ್ತರ ಪರೀಕ್ಷೆಗಳನ್ನು ಆಗಸ್ಟ್ ತಿಂಗಳಲ್ಲಿ ನಡೆಸಲು ಕ್ರಮಕೈಗೊಳ್ಳಲಾಗಿತ್ತು. ಆದರೆ ಮಾನ್ಯ ಜಿಲ್ಲಾಧಿಕಾರಿಯವರು ವಿಶ್ವವಿದ್ಯಾನಿಲಯಕ್ಕೆ ಬರೆದ ಪತ್ರದಲ್ಲಿ ಸದರಿ ಪರೀಕ್ಷೆಗಳನ್ನು ರದ್ದುಪಡಿಸಲು ಸೂಚಿಸಿರುವ ವಿಷಯವನ್ನು ಸಭೆಯ ಗಮನಕ್ಕೆ ತಂದರು. ಪ್ರಸ್ತುತ ವಿಶ್ವವಿದ್ಯಾನಿಲಯದಲ್ಲಿ ಬಾಕಿಯಿರುವ ಸ್ನಾತಕ ಕಾರ್ಯಕ್ರಮಗಳ ಕೆಲವೊಂದು ಪರೀಕ್ಷೆಗಳನ್ನು ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳ ಪರೀಕ್ಷೆಗಳನ್ನು ಕೋವಿಡ್-19ರ ಎಲ್ಲಾ ಶಿಷ್ಟಾಚಾರಗಳನ್ನು ಪರಿಪಾಲಿಸಿಕೊಂಡು ನಡೆಸಲು ಅನುಮತಿ ನೀಡಬೇಕೆಂದು ಮಾನ್ಯ ಜಿಲ್ಲಾಧಿಕಾರಿಯವರಲ್ಲಿ ಮನವಿ ಮಾಡುವ ಬಗ್ಗೆ ಪ್ರಸ್ತಾವಿಸಿದಾಗ ಸಭೆಯು ತನ್ನ ಒಪ್ಪಿಗೆ ಸೂಚಿಸಿತು.

11. ಪರೀಕ್ಷಾ ಸಂಬಂಧ ಯುಜಿಸಿ ಮತ್ತು ಸರಕಾರದ ಮಾರ್ಗಸೂಚಿಗಳನ್ನು ಪಾಲಿಸಲಾಗುವುದೆಂದು ತಿಳಿಸಿದರು.

12. ಮಂಗಳೂರು ವಿಶ್ವವಿದ್ಯಾನಿಲಯವು "ಗ್ರಾಮಗಳ ದತ್ತು ಯೋಜನೆಯಡಿ" ಐದು ಗ್ರಾಮಗಳು ಮತ್ತು ಹತ್ತು ಶಾಲೆಗಳನ್ನು ದತ್ತು ಪಡೆದುಕೊಂಡಿದ್ದು, ತತ್ಸಂಬಂಧ ಕಾರ್ಯನಿರ್ವಹಿಸಲು ಒಂದು ಪೂರ್ಣಕಾಲಿಕ ಸಿಬ್ಬಂದಿಯೊಂದಿಗೆ ಪ್ರತ್ಯೇಕ ಘಟಕವನ್ನು ಪ್ರಾರಂಭಿಸಲು ಕ್ರಮಕೈಗೊಳ್ಳುವುದಾಗಿ ತಿಳಿಸಿದರು.

I. **ನಡವಳಿಗಳ ದೃಢೀಕರಣ**

1. ದಿನಾಂಕ 25.02.2021 ರಂದು ನಡೆದ ಶೈಕ್ಷಣಿಕ ಮಂಡಳಿಯ 2020-21ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ

   - **ದೃಢೀಕರಿಸಲಾಯಿತು.** -

2. ದಿನಾಂಕ 09.04.2021 ರಂದು ನಡೆದ ಶೈಕ್ಷಣಿಕ ಮಂಡಳಿಯ 2021-22ನೇ ಸಾಲಿನ ಪ್ರಥಮ ವಿಶೇಷ ಸಭೆಯ ನಡವಳಿಯ ದೃಢೀಕರಣ

   - **ದೃಢೀಕರಿಸಲಾಯಿತು.** -

II. **ಘನತೆವೆತ್ತ ಕುಲಾಧಿಪತಿಗಳಿಂದ ಅನುಮೋದನೆಗೊಂಡ ವಿನಿಯಮಗಳು**

ಯಾವುದೂ ಇರುವುದಿಲ್ಲ.

III. **ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು:**

| | |
|---|---|
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಶೈ.ಸಾ.ಸ.1:1 (2021-22) |
| ವಿಷಯ: | ಪಿ.ಹೆಚ್.ಡಿ. ಕಾರ್ಯಕ್ರಮವನ್ನು ನಿಯಂತ್ರಿಸುವ ವಿನಿಯಮಕ್ಕೆ ತಿದ್ದುಪಡಿ ಅನುಮೋದನೆ ಬಗ್ಗೆ. |
| ನಿರ್ಣಯ: | ತಿದ್ದುಪಡಿ ವಿನಿಯಮವನ್ನು ಅನುಮೋದಿಸಲಾಯಿತು. ತಿದ್ದುಪಡಿ ವಿನಿಯಮವನ್ನು ಸರಕಾರದ ಅನುಮೋದನೆಗಾಗಿ ಸಲ್ಲಿಸಲು ಸೂಕ್ತ ಕ್ರಮ ಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಶೈ.ಸಾ.ಸ.1:2 (2021-22) |
| ವಿಷಯ: | ಖಾಸಗಿ ಸಂಸ್ಥೆಗಳು ವಿಶ್ವವಿದ್ಯಾನಿಲಯದ ಮುಖಾಂತರ ಸರ್ಟಿಫಿಕೇಟು/ ಡಿಪ್ಲೋಮಾ ಕಾರ್ಯಕ್ರಮಗಳನ್ನು ಪ್ರಾರಂಭಿಸುವ ಸಂಬಂಧ ವಿಶ್ವವಿದ್ಯಾನಿಲಯದಲ್ಲಿ ಸಾಮಾನ್ಯ ನೀತಿ ಅಳವಡಿಸುವ ಬಗ್ಗೆ. |
| ನಿರ್ಣಯ: | ಕಾರ್ಯಸೂಚಿಯನ್ನು ಕೂಲಂಕುಷವಾಗಿ ಪರಿಶೀಲಿಸಲಾಯಿತು. ಸದರಿ |

ವಿಷಯಕ್ಕೆ ಸಂಬಂಧಿಸಿ, ಸಾಮಾನ್ಯ ನೀತಿಯ ಬಗ್ಗೆ ಪರಿನಿಯಮವನ್ನು ರಚಿಸಿಕೊಂಡು ಮುಂದಿನ ಶೈಕ್ಷಣಿಕ ಮಂಡಳಿ ಸಭೆಗೆ ಮಂಡಿಸಲು ಸೂಕ್ತ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಶೈ.ಸಾ.ಸ.1:3 (2021-22)

ವಿಷಯ: ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ಸರ್ಟಿಫಿಕೇಟು ಕಾರ್ಯಕ್ರಮಗಳ ವಿದ್ಯಾರ್ಥಿ ಪ್ರವೇಶಾರ್ಹತೆ ಬದಲಾವಣೆ ಅನುಮೋದನೆ ಬಗ್ಗೆ.

ನಿರ್ಣಯ: ತಿದ್ದುಪಡಿ ವಿನಿಯಮಗಳನ್ನು ಅನುಮೋದಿಸಲಾಯಿತು. ತಿದ್ದುಪಡಿ ವಿನಿಯಮಗಳನ್ನು ಸರಕಾರದ ಅನುಮೋದನೆಗಾಗಿ ಸಲ್ಲಿಸಲು ಸೂಕ್ತ ಕ್ರಮ ಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಶೈ.ಸಾ.ಸ.1:4 (2021-22)

ವಿಷಯ: ಕೊಡವ ಪಿ.ಜಿ.ಡಿಪ್ಲೋಮಾ ಕಾರ್ಯಕ್ರಮದ ಪಠ್ಯಕ್ರಮದ ಅನುಮೋದನೆ ಬಗ್ಗೆ.

ನಿರ್ಣಯ: ಕಲಾ ನಿಕಾಯದ ಅನುಮೋದನೆ ಪಡೆದುಕೊಳ್ಳುವ ಷರತ್ತಿನ ಮೇರೆಗೆ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಶೈ.ಸಾ.ಸ.1:5 (2021-22)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸಹಾಯಕ ಅಭಿಯಂತರ (A.E.) ಹುದ್ದೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ನಿಯಂತ್ರಿಸುವ ಪರಿನಿಯಮದ ಅನುಮೋದನೆ ಬಗ್ಗೆ.

ನಿರ್ಣಯ: ಸರಕಾರದ ಪತ್ರ ಕ್ರಮಾಂಕ: ಇಡಿ 16 ಯುಡಿಎಸ್ 2020 ದಿನಾಂಕ 17.07.2021ರಲ್ಲಿ ಪರಿಷ್ಕೃತ ಕರಡು ಪರಿನಿಯಮಗಳ ಜೊತೆಗೆ ವಿಶ್ವವಿದ್ಯಾನಿಲಯದ ಇಂಜಿನಿಯರ್ ವಿಭಾಗದ ಎಲ್ಲಾ ವೃಂದಗಳ ನೇಮಕಾತಿ ನಿಯಮಗಳನ್ನು ರೂಪಿಸಿ/ಸಿದ್ಧಪಡಿಸಿ ವಿಶ್ವವಿದ್ಯಾನಿಲಯದ ಅಗತ್ಯ ಪ್ರಾಧಿಕಾರಗಳ ಅನುಮೋದನೆ ಪಡೆದುಕೊಂಡು ಪ್ರಸ್ತಾವನೆ ಸಲ್ಲಿಸಲು ತಿಳಿಸಿರುವುದರಿಂದ ಕಾರ್ಯಸೂಚಿಯ ಪ್ರಸ್ತಾವಿತ ವಿಷಯವನ್ನು ಅದರಲ್ಲಿ ಸೇರಿಸಿಕೊಂಡು ಸಲ್ಲಿಸಬಹುದೆಂಬುದಾಗಿ ನಿರ್ಣಯಿಸಲಾಯಿತು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಡಿಇವಿ:ಶೈ.ಸಾ.ಸ.1:6 (2021-22) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಬ್ಯಾರಿ ಅಧ್ಯಯನ ಪೀಠ ಸ್ಥಾಪನೆ ಬಗ್ಗೆ ರಚಿಸಿದ ಕರಡು ಪರಿನಿಯಮವನ್ನು ತಿದ್ದುಪಡಿ ಮಾಡಿ ಅನುಮೋದಿಸುವ ಕುರಿತು. |
| ನಿರ್ಣಯ: | ತಿದ್ದುಪಡಿ ಪರಿನಿಯಮವನ್ನು ಅನುಮೋದಿಸಲಾಯಿತು. ತಿದ್ದುಪಡಿ ಪರಿನಿಯಮವನ್ನು ಸರಕಾರದ ಅನುಮೋದನೆಗಾಗಿ ಸಲ್ಲಿಸಲು ಸೂಕ್ತ ಕ್ರಮ ಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಡಿಇವಿ:ಶೈ.ಸಾ.ಸ.1:7 (2021-22) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ದಿವಂಗತ ಶ್ರೀ ಕಿಶೋರ್ ಕುಮಾರ್ ಶೆಟ್ಟಿ ಇವರ ಗೌರವಾರ್ಥ ಚಿನ್ನದ ಪದಕ ದತ್ತಿನಿಧಿ ಸ್ಥಾಪನೆ ಬಗ್ಗೆ. |
| ನಿರ್ಣಯ: | ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು:ಶೈ.ಸಾ.ಸ.1:8 (2021-22) |
| ವಿಷಯ: | ಪ್ರೊ. ಎನ್. ಪಿ. ನಾರಾಯಣ ಶೆಟ್ಟಿ, ಸಿಂಡಿಕೇಟ್ ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಉನ್ನತ ಶಿಕ್ಷಣವನ್ನು ನೀಡುತ್ತಿರುವ ವಿಶ್ವವಿದ್ಯಾನಿಲಯದಲ್ಲಿ ಭಾಷಾ ಬೋಧನೆಗೆ ಭಾಷೆಗಳ ಆಯ್ಕೆ ಕುರಿತಂತೆ |
| ನಿರ್ಣಯ: | ಪ್ರಸ್ತಾವನೆಯನ್ನು ಕೂಲಂಕುಷವಾಗಿ ಚರ್ಚಿಸಲಾಯಿತು. ಭಾಷಾ ವಿಷಯದ ಬೋಧನೆಗೆ ಸಂಬಂಧಿಸಿ, ಪ್ರತಿಯೊಂದು ಭಾಷೆಯನ್ನು ಅದೇ ಭಾಷೆ ಮತ್ತು ಲಿಪಿಯಲ್ಲಿ ಬೋಧಿಸುವುದು ಸೂಕ್ತ ಎಂಬುದಾಗಿ ಸಭೆಯು ಅಭಿಪ್ರಾಯಪಟ್ಟಿತು. ಅದರಂತೆ, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬಹುದೆಂಬುದಾಗಿಯೂ ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು:ಶೈ.ಸಾ.ಸ.1:9 (2021-22) |
| ವಿಷಯ: | 2021-2022 ನೇ ಸಾಲಿಗೆ ಶೈಕ್ಷಣಿಕ ಮಂಡಳಿ ಸಮಿತಿಯನ್ನು ರಚಿಸುವ ಬಗ್ಗೆ. |
| ನಿರ್ಣಯ: | ಶೈಕ್ಷಣಿಕ ಮಂಡಳಿ ಸಮಿತಿಯನ್ನು ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು. |

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಶೈ.ಸಾ.ಸ.1:10 (2021-22)

ವಿಷಯ: ಡಾ. ಶಂಕರ್ ಭಟ್, ಶೈಕ್ಷಣಿಕ ಮಂಡಳಿ ಸದಸ್ಯರು, ಇವರು ಸಲ್ಲಿಸಿರುವ ಗೊತ್ತುವಳಿ ಕುರಿತು

ನಿರ್ಣಯ: ಗೊತ್ತುವಳಿಯನ್ನು ಪರಿಗಣಿಸಿಕೊಂಡು ವಿಶ್ವವಿದ್ಯಾನಿಲಯದ ಕ್ಯಾಂಪಸ್‌ನಲ್ಲಿರುವ ಭಾರತೀಯ ಸ್ಟೇಟ್‌ಬ್ಯಾಂಕ್ ಮತ್ತು ಬ್ಯಾಂಕ್ ಆಫ್ ಬರೋಡ ಗಳನ್ನು ಸಂಪರ್ಕಿಸಿ, ವಿಶ್ವವಿದ್ಯಾನಿಲಯದ ಆಡಳಿತಸೌಧದಲ್ಲಿ ಓರ್ವ ಬ್ಯಾಂಕ್ ಸಿಬ್ಬಂದಿ ಕಾರ್ಯನಿರ್ವಹಿಸುವಂತೆ ಸದರಿ ಬ್ಯಾಂಕ್‌ಗಳ ಅಧಿಕಾರಿಗಳಿಗೆ ತಿಳಿಸಲು ಸೂಕ್ತ ಕ್ರಮ ಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಶೈ.ಸಾ.ಸ.1:11 (2021-22)

ವಿಷಯ: ಪದವಿ ಮಟ್ಟದ ಸ್ಪೀಚ್ ಲ್ಯಾಂಗ್ವೇಜ್ ಆಂಡ್ ಹಿಯರಿಂಗ್ ಕಾರ್ಯಕ್ರಮದ ವಿನಿಯಮಕ್ಕೆ ತಿದ್ದುಪಡಿ ಅನುಮೋದನೆ ಬಗ್ಗೆ.

ನಿರ್ಣಯ: ತಿದ್ದುಪಡಿ ವಿನಿಯಮವನ್ನು ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಅನುಮೋದಿಸಲಾಯಿತು. ತದನಂತರ, ತಿದ್ದುಪಡಿ ವಿನಿಯಮವನ್ನು ಸರಕಾರದ ಅನುಮೋದನೆಗಾಗಿ ಸಲ್ಲಿಸಲು ಸೂಕ್ತ ಕ್ರಮ ಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಶೈ.ಸಾ.ಸ.1:12 (2021-22)

ವಿಷಯ: ಪದವಿ ಮಟ್ಟದ ಕೊಡವ ಭಾಷಾ ವಿಷಯದ ಪಠ್ಯಕ್ರಮದ ಅನುಮೋದನೆ ಬಗ್ಗೆ

ನಿರ್ಣಯ: ಕಲಾ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಹಣಕಾಸು:ಶೈ.ಸಾ.ಸ.1:13 (2021-22)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 2021-22ನೇ ಸಾಲಿನ ಆಯವ್ಯಯ ಅಂದಾಜುಗಳು ಮತ್ತು 2020-21ನೇ ಸಾಲಿನ ಪರಿಷ್ಕೃತ ಆಯವ್ಯಯ ಅಂದಾಜುಗಳ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ:ಶೈ.ಸಾ.ಸ.1:14 (2021-22)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 2019-20ನೇ ಸಾಲಿನ ವಾರ್ಷಿಕ ವರದಿಯ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಶೈ.ಸಾ.ಸ.1:15 (2021-22)

ವಿಷಯ: GST ಸರ್ಟಿಫಿಕೇಟು ಮತ್ತು ಡಿಪ್ಲೋಮಾ ಕಾರ್ಯಕ್ರಮಗಳ ವಿನಿಯಮ ಮತ್ತು ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

ನಿರ್ಣಯ: ವಾಣಿಜ್ಯ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. ವಿನಿಯಮವನ್ನು ಸರಕಾರದ ಅನುಮೋದನೆಗಾಗಿ ಸಲ್ಲಿಸಲು ಸೂಕ್ತ ಕ್ರಮ ಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಶೈ.ಸಾ.ಸ.1:16 (2021-22)

ವಿಷಯ: ಸ್ನಾತಕೋತ್ತರ ಕಾರ್ಯಕ್ರಮಗಳನ್ನು ನಿಯಂತ್ರಿಸುವ ತಿದ್ದುಪಡಿ ವಿನಿಯಮದ ಅನುಮೋದನೆ ಬಗ್ಗೆ.

ನಿರ್ಣಯ: ತಿದ್ದುಪಡಿ ವಿನಿಯಮವನ್ನು ಅನುಮೋದಿಸಲಾಯಿತು. ತಿದ್ದುಪಡಿ ವಿನಿಯಮವನ್ನು ಸರಕಾರದ ಅನುಮೋದನೆಗಾಗಿ ಸಲ್ಲಿಸಲು ಸೂಕ್ತ ಕ್ರಮ ಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಶೈ.ಸಾ.ಸ.1:17 (2021-22)

ವಿಷಯ: ಪದವಿ ಮಟ್ಟದ ಕಾರ್ಯಕ್ರಮಗಳನ್ನು ನಿಯಂತ್ರಿಸುವ ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ತಿದ್ದುಪಡಿ ವಿನಿಯಮದ ಅನುಮೋದನೆ ಬಗ್ಗೆ.

ನಿರ್ಣಯ: ತಿದ್ದುಪಡಿ ವಿನಿಯಮವನ್ನು ಅನುಮೋದಿಸಲಾಯಿತು. ತಿದ್ದುಪಡಿ ವಿನಿಯಮವನ್ನು ಸರಕಾರದ ಅನುಮೋದನೆಗಾಗಿ ಸಲ್ಲಿಸಲು ಸೂಕ್ತ ಕ್ರಮ ಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಡಿಇವಿ:ಶೈ.ಸಾ.ಸ.1:18 (2021-22) |
| ವಿಷಯ: | ಯುಜಿಸಿ, ನ್ಯಾಕ್ ಮಾರ್ಗಸೂಚಿ ಪ್ರಕಾರ IQAC ಸಮಿತಿಯನ್ನು ಪುನರ್ರಚಿಸುವ ಬಗ್ಗೆ. |
| ನಿರ್ಣಯ: | IQAC ಸಮಿತಿಯ ಪುನರ್ರಚನೆಯ ಪಟ್ಟಿಯಲ್ಲಿ ನಮೂದಿಸಿರುವ ಕ್ರಮಸಂಖ್ಯೆಯಲ್ಲಿ **7d** ಯನ್ನು ಅಳಿಸಬೇಕೆಂಬುದಾಗಿ ಸೂಚಿಸಿ ಉಳಿದಂತೆ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. |
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಶೈ.ಸಾ.ಸ.1:19 (2021-22) |
| ವಿಷಯ: | ಎಂ.ಎಸ್ಸಿ ಸ್ಪೀಚ್ ಲ್ಯಾಂಗ್ವೇಜ್ ಪೇಥಾಲಜಿ ಮತ್ತು ಎಂ.ಎಸ್ಸಿ. ಆಡಿಯಾಲಜಿ ಕಾರ್ಯಕ್ರಮಗಳ ವಿನಿಯಮ ಮತ್ತು ಪಠ್ಯಕ್ರಮಗಳ ಅನುಮೋದನೆ ಬಗ್ಗೆ. |
| ನಿರ್ಣಯ: | ಫಾದರ್ ಮುಲ್ಲರ್ಸ್ ಕಾಲೇಜು, ಮಂಗಳೂರು ಎಂಬ ವಿದ್ಯಾಸಂಸ್ಥೆಗೆ ಶೈಕ್ಷಣಿಕ ವರ್ಷ 2020-21ನೇ ಸಾಲಿಗೆ M.Sc.(Audiology) ಮತ್ತು M.Sc. (Speech and Language Pathology) ಕಾರ್ಯಕ್ರಮಗಳಿಗೆ ಸಂಯೋಜನೆ ನೀಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. ಮುಂದುವರಿದು, ವಿನಿಯಮ ಮತ್ತು ಪಠ್ಯಕ್ರಮಗಳನ್ನು ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಅನುಮೋದಿಸಲಾಯಿತು. ವಿನಿಯಮವನ್ನು ಸರಕಾರದ ಅನುಮೋದನೆಗಾಗಿ ಸಲ್ಲಿಸಲು ಸೂಕ್ತ ಕ್ರಮ ಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು. |
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಶೈ.ಸಾ.ಸ.1:20 (2021-22) |
| ವಿಷಯ: | ಸಂಯೋಜಿತ ಕಾಲೇಜುಗಳಲ್ಲಿ ನಡೆಸಲಾಗುವ ಸ್ನಾತಕೋತ್ತರ ಕಾರ್ಯಕ್ರಮಗಳನ್ನು ನಿಯಂತ್ರಿಸುವ ಮಾರ್ಗಸೂಚಿಗಳ ತಿದ್ದುಪಡಿ ಪರಿನಿಯಮದ ಅನುಮೋದನೆ ಬಗ್ಗೆ. |
| ನಿರ್ಣಯ: | ತಿದ್ದುಪಡಿ ಪರಿನಿಯಮವನ್ನು ಅನುಮೋದಿಸಲಾಯಿತು. |
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಶೈ.ಸಾ.ಸ.1:21 (2021-22) |
| ವಿಷಯ: | ಪದವಿ ಮಟ್ಟದ ತೃತೀಯ ಸೆಮಿಸ್ಟರ್‌ನ ಕನ್ನಡ ಭಾಷೆ ಮತ್ತು ಕನ್ನಡ ಕೋರ್ ಕೋರ್ಸ್‌ಗಳ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ. |
| ನಿರ್ಣಯ: | ಕಲಾ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಶೈ.ಸಾ.ಸ.1:22 (2021-22) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜನೆಗೊಳಪಟ್ಟ ಸಂಸ್ಥೆಗಳನ್ನು ಸಂಶೋಧನಾ ಕೇಂದ್ರವನ್ನಾಗಿ ಗುರುತಿಸಿ ಮಾನ್ಯತೆ ನೀಡುವ ಮಾರ್ಗಸೂಚಿಯ ಬಗ್ಗೆ. |
| ನಿರ್ಣಯ: | ಪ್ರಸ್ತಾವನೆಯ ಮಾರ್ಗಸೂಚಿಯನ್ನು ಮತ್ತು ತಿದ್ದುಪಡಿ ಪರಿನಿಯಮವನ್ನು ಅನುಮೋದಿಸಲಾಯಿತು. ತಿದ್ದುಪಡಿ ಪರಿನಿಯಮವನ್ನು ಸರಕಾರದ ಅನುಮೋದನೆಗಾಗಿ ಸಲ್ಲಿಸಲು ಸೂಕ್ತ ಕ್ರಮ ಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಶೈ.ಸಾ.ಸ.1:23 (2021-22) |
| ವಿಷಯ: | ಬಿ.ಎಸ್ಸಿ. (ಫುಡ್ ಟೆಕ್ನಾಲಜಿ) ಕಾರ್ಯಕ್ರಮಕ್ಕೆ ಪ್ರವೇಶಾತಿ ಪಡೆದ Mr. Calvyn Nathan Lewis ಎಂಬ ವಿದ್ಯಾರ್ಥಿಯ ಪ್ರವೇಶಾತಿ ಬಗ್ಗೆ. |
| ನಿರ್ಣಯ: | ಸದರಿ ಪ್ರವೇಶಾತಿಯನ್ನು ಒಂದು ಬಾರಿಗೆ ಮಾತ್ರ ಅನ್ವಯವಾಗುವಂತೆ ವಿಶೇಷ ಪ್ರಕರಣವೆಂದು ಪರಿಗಣಿಸಿ, ಇದನ್ನು ಪೂರ್ವೋಧಾರಣೆ ಎಂದು ಪರಿಗಣಿಸತಕ್ಕದಲ್ಲ ಎಂಬ ಷರತ್ತಿನ ಮೇರೆಗೆ, ವಿದ್ಯಾರ್ಥಿ ಪ್ರವೇಶಾತಿಯನ್ನು ಅನುಮೋದಿಸಬಹುದೆಂಬುದಾಗಿ ಶೈಕ್ಷಣಿಕ ಮಂಡಳಿ ಸಮಿತಿ ಸಭೆಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.<br><br>ಮುಂದುವರಿದು, ಸಂಬಂಧಿತ ಕಾಲೇಜು ಪ್ರಾಂಶುಪಾಲರಿಗೆ ಈ ಬಗ್ಗೆ ತಿಳುವಳಿಕೆ ಪತ್ರ ನೀಡಬೇಕೆಂಬುದಾಗಿಯೂ ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಶೈ.ಸಾ.ಸ.1:24 (2021-22) |
| ವಿಷಯ: | ಶೈಕ್ಷಣಿಕ ವರ್ಷ 2021-22ನೇ ಸಾಲಿನ ಪದವಿ/ಸ್ನಾತಕೋತ್ತರ/ಪಿ.ಹೆಚ್ ಡಿ. ಕಾರ್ಯಕ್ರಮಗಳಿಗೆ ವಿದೇಶಿ ವಿದ್ಯಾರ್ಥಿಗಳ ಪ್ರವೇಶಾತಿ ಬಗ್ಗೆ. |
| ನಿರ್ಣಯ: | ಶೈಕ್ಷಣಿಕ ಮಂಡಳಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು. |

ಇತರ ವಿಷಯಗಳು:

1. ಮಂಗಳೂರು ವಿಶ್ವವಿದ್ಯಾನಿಲಯದ ಮುಖಾಂತರ ನಡೆಸಲ್ಪಡುವ ಸರ್ಟಿಫಿಕೇಟ್/ಡಿಪ್ಲೋಮಾ ಕಾರ್ಯಕ್ರಮಗಳ ವಿನಿಯಮಗಳಲ್ಲಿ ಏಕರೂಪತೆಯನ್ನು ಕಾಯ್ದುಕೊಳ್ಳಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ನಿರ್ಣಯಿಸಲಾಯಿತು
2. ಮಾನ್ಯ ಉಪಮುಖ್ಯ ಮಂತ್ರಿಗಳ ಪತ್ರ ಸಂಖ್ಯೆ: ಉಮು/ಉ.ಶಿ.ಐಟಿ&ಬಿಟಿ.ವಿ&ತಂ.ಕೌಅ/1081/2020-21 ದಿನಾಂಕ: 02.07.2021ರಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಮೂಡಬಿದ್ರೆಯಲ್ಲಿ ವಿಶ್ವವಿದ್ಯಾನಿಲಯದ Constituent ಕಾಲೇಜನ್ನು ಪ್ರಸಕ್ತ ಶೈಕ್ಷಣಿಕ ವರ್ಷದಿಂದಲೇ ಪ್ರಾರಂಭಿಸಲು ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಿರುವುದರಿಂದ ಈ ಬಗ್ಗೆ ಶೀಘ್ರದಲ್ಲಿ ಅಗತ್ಯ ಕ್ರಮಕೈಗೊಳ್ಳಬೇಕಾಗಿರುವುದಾಗಿ ಮಾನ್ಯ ಕುಲಪತಿಗಳು ಸಭೆಗೆ ತಿಳಿಸಿದಾಗ ಸಭೆಯು ತನ್ನ ಒಪ್ಪಿಗೆಯನ್ನು ತಿಳಿಸಿತು.
3. ನಗರ ಕಾರ್ಯದರ್ಶಿ, ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಇವರ ಪತ್ರ ದಿನಾಂಕ 04.08.2021ರ ಪತ್ರವನ್ನು ಸಭೆಯ ಗಮನಕ್ಕೆ ತಂದರು. ಸದರಿ ಪತ್ರದಲ್ಲಿ ಬಾಕಿ ಉಳಿದಿರುವ ಸ್ನಾತಕ ಮತ್ತು ಸ್ನಾತಕೋತ್ತರ ಪರೀಕ್ಷೆಗಳನ್ನು ನಡೆಸಲು ಸೂಕ್ತ ಕ್ರಮಕೈಗೊಳ್ಳಲು ಮನವಿ ಮಾಡಿಕೊಂಡಿದ್ದು, ಈ ಬಗ್ಗೆ ಮಾನ್ಯ ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ, ಪರೀಕ್ಷೆಗಳನ್ನು ನಡೆಸಲು ಅಗತ್ಯಕ್ರಮಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.
4. ಮಂಗಳೂರು ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಕಾಲೇಜುಗಳ "ಅತ್ಯುತ್ತಮ ಕಾಲೇಜು ಸಂಚಿಕೆ ಸ್ಪರ್ಧೆ - 2019-20"ರ ಫಲಿತಾಂಶವನ್ನು ಶೈಕ್ಷಣಿಕ ಮಂಡಳಿ ಸಭೆಯಲ್ಲಿ ಪ್ರಕಟಿಸಿ, ಬಹುಮಾನಗಳನ್ನು ವಿತರಿಸಲಾಯಿತು. ವಿವರಗಳು ಈ ಕೆಳಗಿನಂತಿವೆ.

   ವರ್ಗ - I

   ಪ್ರಥಮ ಬಹುಮಾನ: "ಮನಿಷಾ" - ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಕಾಲೇಜು (ಸ್ವಾಯತ್ತ) ಉಜಿರೆ
   ದ್ವಿತೀಯ ಬಹುಮಾನ: "ದೀಪಿಕಾ" - ಬೆಸೆಂಟ್ ಮಹಿಳಾ ಕಾಲೇಜು, ಮಂಗಳೂರು
   ತೃತೀಯ ಬಹುಮಾನ: "ದರ್ಶನ" - ಭಂಡಾರ್‌ಕಾರ್ಸ್ ಕಲಾ ಮತ್ತು ವಿಜ್ಞಾನ ಕಾಲೇಜು, ಕುಂದಾಪುರ

   ವರ್ಗ - II

   ಪ್ರಥಮ ಬಹುಮಾನ: "ಹಿರಿಯ ಸಿರಿ" - ಸರಕಾರಿ ಪ್ರಥಮ ದರ್ಜೆ ಕಾಲೇಜು, ಹಿರಿಯಡಕ, ಉಡುಪಿ
   ದ್ವಿತೀಯ ಬಹುಮಾನ: "ಸುಪ್ರಭ" - ಉಪೇಂದ್ರ ಪೈ ಮೆಮೋರಿಯಲ್ ಕಾಲೇಜು, ಉಡುಪಿ
   ತೃತೀಯ ಬಹುಮಾನ: "ಸಂಧ್ಯಾ ಸೌರಭ" - ಬೆಸೆಂಟ್ ಸಂಧ್ಯಾ ಕಾಲೇಜು, ಮಂಗಳೂರು

ಮಾನ್ಯ ಕುಲಪತಿಗಳು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಿ/-
ಕುಲಸಚಿವರು

ಸಹಿ/-
ಕುಲಪತಿಗಳು